All India Radio: Bangalore
Regional Bulletin In Kannada
01.06.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಭೂಕುಸಿತ ಹಿನ್ನೆಲೆ : ಪಶ್ಚಿಮಘಟ್ಟ ಧಾರಣ ಸಾಮರ್ಥ್ಯದ ಅಧ್ಯಯನಕ್ಕೆ ಸಚಿವ ಈಶ್ವರ್ ಖಂಡ್ರೆ ಸೂಚನೆ
- ಬೀದರ್‌ನ ಖಾನಾಪುರದಲ್ಲಿ ಸರಕು ಶೆಡ್, ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಕೇಂದ್ರ ಸಚಿವ ಸೋಮಣ್ಣ ಶಂಕುಸ್ಥಾಪನೆ
- ಕುಣಿಗಲ್ ಪಾಲಿನ ನೀರು ಪಡೆಯಲು ಹೋರಾಟ ಅನಿವಾರ್ಯ : ಶಾಸಕ ಡಾ.ಹೆಚ್.ಡಿ.ರಂಗನಾಥ್
- ಅಂತಾರಾಷ್ಟ್ರೀಯ ಯೋಗದಿನಾಚರಣೆ : ಮೈಸೂರಿನಲ್ಲಿ ಆಯುಷ್ ಇಲಾಖೆಯಿಂದ ಇಂದು ಯೋಗ ಧನುಷ್ ಕಾರ್ಯಕ್ರಮ

**************

ದಕ್ಷಿಣ ಕನ್ನಡ, ಕೊಡಗು ಮೊದಲಾದ ಭಾಗದಲ್ಲಿ ಮಳೆಗೆ ಭೂಕುಸಿತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಪಶ್ಚಿಮಘಟ್ಟದ ಧಾರಣಾ ಸಾಮರ್ಥ್ಯ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆಸೂಚನೆ ನೀಡಿದ್ದಾರೆ.ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಲಿಖಿತ ಸೂಚನೆ ನೀಡಿರುವ ಅವರು, ಪಶ್ಚಿಮ ಘಟ್ಟದಲ್ಲಿ ಹಲವು ರಸ್ತೆ, ಮತ್ತಿತರ ಯೋಜನೆಗಳು ಕಾರ್ಯಗತವಾಗುತ್ತಿದ್ದು, ಇದರಿಂದ ಘಟ್ಟ ಅಪಾಯಕ್ಕೆ ಸಿಲುಕಿದೆ. ಆಸ್ತಿಹಾನಿ, ಬೆಳೆ ಹಾನಿ, ಜೀವಹಾನಿಯ ಜೊತೆಗೆ ವನ್ಯ ಜೀವಿಗಳೂ ಸಂಕಷ್ಟ ಎದುರಿಸುವಂತಾಗಿದೆ ಎಂದು ತಜ್ಞರು ಆತಂಕ ವ್ಯಕ್ತಪಡಿಸಿರುವುದಾಗಿ ಅವರು ತಿಳಿಸಿದ್ದಾರೆ.ಪಶ್ಚಿಮಘಟ್ಟಕ್ಕೆ ತೊಂದರೆಯಾದರೆ ಮುಂಬರುವ ದಿನಗಳಲ್ಲಿ ತೀವ್ರ ಜಲಕ್ಷಾಮ ಎದುರಾಗುವ ಭೀತಿ ಇದೆ ಎಂಬ ತಜ್ಞರ ಅಭಿಪ್ರಾಯ ಉಲ್ಲೇಖಿಸಿರುವ ಅವರು ಈ ನಿಟ್ಟಿನಲ್ಲಿ ಅಧ್ಯಯನ ಮಾಡಿ ೩ ತಿಂಗಳೊಳಗೆ

ಪಶ್ಚಿಮಘಟ್ಟದ ಧಾರಣ ಸಾಮರ್ಥ್ಯದ ಬಗ್ಗೆ ವರದಿ ಸಲ್ಲಿಸಲು ಸೂಚಿಸಿದ್ದಾರೆ.ಜೀವವೈವಿಧ್ಯತೆಯ ತಾಣವಾದ ಪಶ್ಚಿಮಘಟ್ಟದಲ್ಲಿ ಕರ್ನಾಟಕದ ಅರಣ್ಯಗಳ ಪೈಕಿ ಶೇ.೬೦ರಷ್ಟು ಅರಣ್ಯ ಪ್ರದೇಶವಿದ್ದು, ಇದು ಸಸ್ಯಸಂಕುಲ, ಪ್ರಾಣಿ ಸಂಕುಲ, ಕೀಟ ಸಂಕುಲಗಳ ನೆಲೆವೀಡಾಗಿದೆ. ಪಶ್ಚಿಮಘಟ್ಟಗಳು ಮಳೆಯ ಮಾರುತ ತಡೆದು ಮಳೆ ಸುರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

**************

ಬೀದರ್ ನ ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ ೧೫ ಕೋಟಿ ರೂ. ವೆಚ್ಚದಲ್ಲಿ ಸರಕು ಶೆಡ್ ನಿರ್ಮಾಣವಾಗುತ್ತಿದ್ದು, , ಇದು ಈ ಪ್ರದೇಶದಲ್ಲಿ ಸರಕು ಲೋಡಿಂಗ್‌ಗೆ ಮತ್ತಷ್ಟು ಉತ್ತೇಜನ ನೀಡಲಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ತಿಳಿಸಿದ್ದಾರೆ. ಮುಂದಿನ ೫೦ ವರ್ಷಗಳ ಅವಶ್ಯಕತೆಗಳನ್ನು ಗಮನದಲ್ಲಿಟ್ಟು ಕೊಂಡು ಹೊಸ ಸರಕು ಶೆಡ್‌ನ್ನು ನಿರ್ಮಿಸಲಾಗುತ್ತಿದೆಂದು ಅವರು ಹೇಳಿದ್ದಾರೆ.ಬೀದರ ಜಿಲ್ಲೆಯ ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ ಸರಕು ಶೆಡ್ ನಿರ್ಮಾಣ ಮತ್ತು ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡಿ ಮಾತನಾಡಿದ ಅವರು, ರಸ್ತೆ ಸಾರಿಗೆಗೆ ಹೋಲಿಸಿದರೆ ರೈಲ್ವೆ ಮೂಲಕ ಸಾರಿಗೆ ವೆಚ್ಚ ಕಡಿಮೆಯಾಗಿದೆ. ಇದು , ಸಣ್ಣ ಕೈಗಾರಿಕೆಗಳಿಗೆ ತಮ್ಮ ಉತ್ಪನ್ನಗಳನ್ನು ವಿವಿಧ ಸ್ಥಳಗಳಿಗೆ ಸಾಗಿಸಲು ಸಹಾಯಕವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಬೀದರ್ ರೈಲ್ವೆ ನಿಲ್ದಾಣದ ಪುನರಾಭಿವೃದ್ಧಿಯನ್ನು ೨೪. ಕೋಟಿ೩೫ ಲಕ್ಷ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿಗಳು ಪೂರ್ಣಗೊಳ್ಳುವ ಹಂತದಲ್ಲಿವೆ. ಯಾದಗಿರಿ ನಿಲ್ದಾಣವನ್ನು ೨೬ ಕೋಟಿ ೧೨ ಲಕ್ಷ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. ರಾಯಚೂರು ನಿಲ್ದಾಣದ ಪುನರಾಭಿವೃದ್ಧಿಯನ್ನು ೨೧ಕೋಟಿ ೭೧ ಲಕ್ಷ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ಒಟ್ಟು ೫೮ ರೈಲ್ವೆ ನಿಲ್ದಾಣಗಳನ್ನು ಪುನರಾಭಿವೃದ್ಧಿ ಪಡಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ

**************

ಕುಣಿಗಲ್ ತಾಲೂಕು ಆರಂಭದಿಂದಲೂ ಹೇಮಾವತಿ ನೀರಿನ ತನ್ನ ಪಾಲು ೩.೦೧ ಟಿಎಂಸಿ ನೀರನ್ನು ಪಡೆಯಲು ವಂಚಿತವಾಗಿದ್ದು, ಈ ಪಾಲಿನ ನೀರು ಪಡೆಯಲು ಲಿಂಕ್ ಕೆನಾಲ್ ಯೋಜನೆ ಅನಿವಾರ್ಯ. ಇದಕ್ಕಾಗಿ ಉಗ್ರ ಹೋರಾಟಕ್ಕೂ ಸಿದ್ಧ" ಎಂದು ಶಾಸಕ ಡಾ. ಎಚ್.ಡಿ. ರಂಗನಾಥ್ ತಿಳಿಸಿದ್ದಾರೆ.ಕಾವೇರಿ ಜಲಾನಯನ ಪ್ರದೇಶಕ್ಕೆ ಒಳಪಟ್ಟ ಮೂಲ ಫಲಾನುಭವಿಗಳಾಗಿದ್ದರೂ ತಾಲೂಕು ತನ್ನ ಪಾಲಿನ ನೀರು ಪಡೆಯಲು ಸಾಧ್ಯವಾಗಿಲ್ಲ. ಕಳೆದ ಹತ್ತು ವರ್ಷಗಳಲ್ಲಿ ತಾಲ್ಲೂಕಿಗೆ ಹರಿದಿರುವುದು ಕೇವಲ ೩೦೦-೫೦೦ ಎಂಸಿಎಫ್ ನೀರು ಮಾತ್ರ. ಶೇ. ೯೦ ನೀರು ಬಂದಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ೨೦೧೮ರಲ್ಲಿ ಈ ಲಿಂಕ್ ಕೆನಾಲ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಯಿತು. ಹಲವಾರು ಕಾರಣಗಳಿಂದಾಗಿ ಕಾಮಗಾರಿಯು ವಿಳಂಭವಾಗಿತ್ತು. ಈ ಯೋಜನೆ ವಿರೋಧಿಸಿ ಹೋರಾಟಗಳು ನಡೆಯುತ್ತಿರುವುದು ವಿಷಾದನೀಯ ಎಂದು ಹೇಳಿದ್ದಾರೆ.

**************

೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನಲೆಯಲ್ಲಿ ಕೇಂದ್ರ ಆಯುಷ್ ಇಲಾಖೆ ಹಾಗೂ ಮೈಸೂರು ಜಿಲ್ಲಾ ಪಂಚಾಯತ್ ಸಂಯುಕ್ತವಾಗಿ ಲಲಿತ ಮಹಲ್ ಅರಮನೆ ಮುಂಭಾಗ ಏರ್ಪಡಿಸಿದ್ದ ಯೋಗ ಧನುಷ್ ಕಾರ್ಯಕ್ರಮದಲ್ಲಿ ನೂರಾರು ಯೋಗಪಟುಗಳು ಭಾಗವಹಿಸಿದ್ದರು. ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನಲೆಯಲ್ಲಿ ಇಂದು ಪೂರ್ವಭಾವಿಯಾಗಿ ಯೋಗ ಆಯುಷ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ಮತ್ತಷ್ಟು ಪೂರ್ವಭಾವಿ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಯಶಸ್ವಿಗೊಳಿಸುವುದೇ ಈ ಕಾರ್ಯಕ್ರಮಗಳ ಮೂಲ ಉದ್ದೇಶವಾಗಿದೆ ಈ ಕಾರ್ಯಕ್ರಮ ಯೋಗ ಸಂಸ್ಥೆಗಳ ನೆರವಿನಿಂದ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ರೇಣುಕಾದೇವಿ ತಿಳಿಸಿದ್ದಾರೆ.

ಧ್ವನಿ : ಡಾ.ರೇಣುಕಾದೇವಿ, ಜಿಲ್ಲಾ ಆಯುಷ್ ಅಧಿಕಾರಿ – (೩ ಸೆಕೆಂಡ್ಸ್)

ಕೇಂದ್ರ ಯೋಗ ಆಯುಷ್ ಇಲಾಖೆ ನೀಡುವ ನಿಯಮಗಳನ್ನು ಎಲ್ಲರೂ ಪಾಲಿಸಿ ಯೋಗಾಸನ ಮಾಡಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಯಶಸ್ವಿಗೊಳಿಸಲು ಎಲ್ಲರೂ ಮುಂದಾಗಿರುವುದಾಗಿ ಮೈಸೂರು ಯೋಗ ಸಂಸ್ಥೆಯ ಉಪಾಧ್ಯಕ್ಷ ಪಶುಪತಿ ತಿಳಿಸಿದ್ದಾರೆ.

**************

ಮುಂಗಾರಿಗೆ ಕೃಷಿ ಸಿದ್ಧತೆಯನ್ನು ಮಾಡಿಕೊಳ್ಳಲು ರೈತರಲ್ಲಿ ಜಾಗೃತಿ ಮೂಡಿಸುವುದಕ್ಕಾಗಿ ಕೇಂದ್ರದ ಕೃಷಿ ಮಂತ್ರಾಲಯ ಹಮ್ಮಿಕೊಂಡಿರುವ “ವಿಜ್ಞಾನಿಗಳ ನಡೆ ರೈತರ ಕಡೆ” ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಯಶಸ್ವಿಯಾಗಿ ನಡೆಯುತ್ತಿದೆ. ಕಾರ್ಯಕ್ರಮದ ಅಂಗವಾಗಿ ಕೃಷಿ ವಿಜ್ಞಾನ ಕೇಂದ್ರದಿಂದ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ದೊಡ್ಡಬೆಳವಂಗಲ ರೈತ ಸಂಪರ್ಕ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಹೈನು ಪೋಷಣೆ ಮತ್ತು ಶರೀರ ಶಾಸ್ತ್ರ ಸಂಸ್ಥೆಯ ವಿಜ್ಞಾನಿ ಡಾ. ಕೃಷ್ಣನ್, ಕೃಷಿ ವಿಜ್ಞಾನ ಕೇಂದ್ರದ ಡಾ.ಬಿ.ಜಿ. ಹನುಮಂತರಾಯ ಮಾಹಿತಿ ನೀಡಿದರು. ಬೆಳಗಾವಿ ಜಿಲ್ಲೆಯ ಮತ್ತಿಕೊಪ್ಪ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ, ಕೃಷಿ ಇಲಾಖೆ ಹಾಗೂ ಇಫ್ಕೋ ಸಂಸ್ಥೆಯ ಆಶ್ರಯದಲ್ಲಿ ಇದೇ ೨೯ ರಿಂದ ಜೂನ್ ೧೨ ರವರೆಗೆ ಆಯೋಜಿಸಲಾಗಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಹಿನ್ನಲೆಯಲ್ಲಿ ಇಂದು ತುರಮರಿ ಗ್ರಾಮದಲ್ಲಿ ರೈತರೊಂದಿಗೆ ಸಂವಾದ ನಡೆಸಲಾಯಿತು. ಕೃಷಿ ವಿಜ್ಞಾನ ಕೇಂದ್ರದ ನಿರ್ದೇಶಕರಾದ ಡಾ. ಮಂಜುನಾಥ ಚೌರಡ್ಡಿ, ಮುಂಗಾರು ಬೆಳೆಗಳನ್ನು ವೈಜ್ಞಾನಿಕವಾಗಿ ಬೆಳೆಯುವ ಕ್ರಮದ ಬಗ್ಗೆ ಮಾಹಿತಿ ನೀಡಿ , ರೈತರೊಂದಿಗೆ ಸಂವಾದ ನಡೆಸಿದರು.

ಬೈಟ್ - ಕೃಷಿ ವಿಜ್ಞಾನ ಕೇಂದ್ರದ ನಿರ್ದೇಶಕ ಮಂಜುನಾಥ

**************

ವಿಶ್ವ ಬೈಸಿಕಲ್ ದಿನಾಚರಣೆ ಅಂಗವಾಗಿ ದಾವಣಗೆರೆಯಲ್ಲಿಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಫಿಟ್ ಇಂಡಿಯಾ ಕಾರ್ಯಕ್ರಮದಡಿ ಹಮ್ಮಿಕೊಂಡಿದ್ದ ತಿರಂಗ ಸೈಕಲ್ ರ್‍ಯಾಲಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಚಾಲನೆ ನೀಡಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಹದ ಎಲ್ಲ ಅಂಗಗಳು ದಿನವಿಡೀ ಚಟುವಟಿಕೆಯಿಂದಿರಲು

ಸೈಕ್ಲಿಂಗ್ ಅತ್ಯುತ್ತಮ ವ್ಯಾಯಾಮವಾಗಿದ್ದು, ಇಂದಿನ ಒತ್ತಡ ಜೀವನಕ್ಕೆ ಪ್ರತಿಯೊಬ್ಬರಿಗೂ ಸೈಕ್ಲೀಂಗ್ ಅಗತ್ಯವಾಗಿದೆ ಎಂದರು. ರ್‍ಯಾಲಿಯು ನಗರದ ಪ್ರಮುಖ ರಸ್ತೆಗಳಲ್ಲಿ ಚಲಿಸಿ ಜನ ಜಾಗೃತಿ ಮೂಡಿಸಲಾಯಿತು.

**************

ವಿದ್ಯಾರ್ಥಿಗಳು ತಮ್ಮ ದೈನಂದಿನ ಬದುಕಿನಲ್ಲಿ ಶಿಕ್ಷಣ ಮತ್ತು ಆರೋಗ್ಯಕ್ಕೆ ಮಹತ್ವ ನೀಡಬೇಕು. ಶಿಕ್ಷಣದಿಂದ ಉದ್ಯೋಗ ಪಡೆದರೆ ಆರೋಗ್ಯ ಜೀವನೋತ್ಸಾಹದ ಬದುಕನ್ನು ನೀಡುತ್ತದೆ ಎಂದು ಕರ್ನಾಟಕ ಆಡಳಿತ ಸುಧಾರಣ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಹೇಳಿದ್ದಾರೆ. ದಾಂಡೇಲಿಯ ಅಂಬೇವಾಡಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಪ್ರಧಾನಮಂತ್ರಿ ಉನ್ನತ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಮಂಜೂರಾದ ೫ ಕೋಟಿ ರೂಪಾಯಿ ಸಾಂಸ್ಥಿಕ ಅಭಿವೃದ್ಧಿ ಯೋಜನೆಯನ್ನು ಉದ್ಘಾಟಿಸಿ ಹಾಗೂ ಗ್ರಂಥಾಲಯ, ಬಿ.ಸಿ.ಎ ಕಟ್ಟಡ ಹಾಗೂ ವ್ಯಾಯಾಮ ಶಾಲೆಗಳ ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.ಭಾರತದ ಹತ್ತು ಸಾವಿರಕ್ಕೂ ಹೆಚ್ಚು ಕಾಲೇಜುಗಳು ಕೇಂದ್ರ ಸರ್ಕಾರಕ್ಕೆ ೫ ಕೋಟಿ ರೂಪಾಯಿ ಸಾಂಸ್ಥಿಕ ಅಭಿವೃದ್ಧಿ ಯೋಜನೆಯನ್ನು ಮಂಜೂರು ಮಾಡಲು ಅರ್ಜಿ ಸಲ್ಲಿಸಿದ್ದು, ಕೇವಲ ದೇಶದಾದ್ಯಂತ ೩೦೦ ಕಾಲೇಜುಗಳು ಆಯ್ಕೆಯಾಗಿವೆ. ಕರ್ನಾಟಕದಿಂದ ಕೇವಲ ೧೦ ಕಾಲೇಜುಗಳು ಆಯ್ಕೆಯಾಗಿದ್ದು, ಅಂಬೇವಾಡಿ ಪ್ರಥಮ ದರ್ಜೆ ಕಾಲೇಜು ಕೂಡ ಒಂದಾಗಿರುವುದು ಹೆಮ್ಮೆಯ ವಿಷಯ ಎಂದು ತಿಳಿಸಿದರು.

**************

ನಿಯಮಿತ ಚಿಕಿತ್ಸೆಯಿಂದ ಕ್ಷಯ ರೋಗ ಗುಣಪಡಿಸಲು ಸಾಧ್ಯ. ರೋಗದ ಕುರಿತು ಹೆದರುವ ಅಗತ್ಯವಿಲ್ಲ. ಸೂಕ್ತ ತಿಳಿವಳಿಕೆ ಮುಖ್ಯ ಎಂದು ಯಾದಗಿರಿ ಜಿಲ್ಲಾ ಕ್ಷಯ ರೋಗ ನಿರ್ಮೂಲನಾ ಅಧಿಕಾರಿ ಡಾ.ಸಂಜೀವಕುಮಾರ್ ರಾಯಚೂರಕರ್ ಹೇಳಿದರು.ಯಾದಗಿರಿ ಜಿಲ್ಲೆಯ ಹುಣಸಗಿ ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪ್ರಧಾನ ಮಂತ್ರಿ ಕ್ಷಯ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕ್ಷಯ ರೋಗಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ. ನಿಯಮಿತವಾದ ಚಿಕಿತ್ಸೆ ಹಾಗೂ ಪೌಷ್ಟಿಕ ಆಹಾರಗಳ ಸೇವನೆ, ಇದರ

ಜತೆಯಲ್ಲಿ ವೈದ್ಯರ ಸಲಹೆ ಸೂಚನೆಗಳನ್ನು ಪಾಲಿಸಿದಾಗ ಕ್ಷಯರೋಗ ನಿರ್ಮೂಲನೆ ಮಾಡಬಹುದು ಎಂದು ಅವರು ತಿಳಿಸಿದರು.

*******END*******